**ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ : ಕೇಂದ್ರ ಕಛೇರಿ : ಬೆಂಗಳೂರು**

**ಸಂಖ್ಯೆ/ಕರಾಸಾ/ಕೇಕ/ವಶಾ/ಸಾಮಾನ್ಯ/** 312 **/2021–22** **ದಿನಾಂಕ :** 25/2/2022

**ಸುತ್ತೋಲೆ**

ವಿಷಯ : ಜ್ಯೇಷ್ಠತಾ ಪಟ್ಟಿಗಳನ್ನು ನಿಗಮದ ಅಧಿಕೃತ ಜಾಲತಾಣದಲ್ಲಿ ಪ್ರಕಟಿಸುವ ಕುರಿತು.

* * * * * *

ಅಧಿಕಾರಿ/ಸಿಬ್ಬಂದಿ ವೃಂದಗಳ ದಿನಾಂಕ: 01/01/2021 ರಂದು ಇರುವಂತೆ ಜ್ಯೇಷ್ಠತಾ ಪಟ್ಟಿಗಳನ್ನು ನಿಗಮದ ಅಧಿಕೃತ ಜಾಲತಾಣದಲ್ಲಿ ಪ್ರಕಟಿಸಲಾಗಿತ್ತು. ಪ್ರಸ್ತುತ ದಿನಾಂಕ:01/01/2021 ರಿಂದ 31/12/2021 ರವರೆಗಿನ ಅವಧಿಯನ್ನು ಒಳಗೊಂಡಂತೆ **ದಿನಾಂಕ:01/01/2022 ರಂದು ಇರುವಂತೆ** ಅಧಿಕಾರಿ/ಸಿಬ್ಬಂದಿ ವೃಂದಗಳ ಜ್ಯೇಷ್ಠತಾ ಪಟ್ಟಿಗಳನ್ನು ಸಿದ್ದಪಡಿಸುವ ಕಾರ್ಯ ಪ್ರಗತಿಯಲ್ಲಿದ್ದು, ಅವುಗಳನ್ನು ಸಿದ್ದಪಡಿಸಿ ಹಂತ–ಹಂತವಾಗಿ ನಿಗಮದ ಅಧಿಕೃತ ಜಾಲತಾಣ **ksrtc.karnataka.gov.in** ದಲ್ಲಿ ಪ್ರಕಟಿಸಲಾಗುವುದು. ಆದ್ದರಿಂದ, 4 ಸಾರಿಗೆ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳು/ ಮೇಲ್ವಿಚಾರಕ/ರಾಜ್ಯಮಟ್ಟದ ಮೇಲ್ವಿಚಾರಕೇತರ ಹುದ್ದೆಗಳ ಸಿಬ್ಬಂದಿಗಳು ನಿಗಮದ ಜಾಲತಾಣದಲ್ಲಿ ಪ್ರಕಟಿಸುವ ಜ್ಯೇಷ್ಠತಾ ಪಟ್ಟಿಗಳನ್ನು ಸಕಾಲದಲ್ಲಿ ಗಮನಿಸುವಂತೆ ಹಾಗೂ ತಾತ್ಕಾಲಿಕ ಜ್ಯೇಷ್ಠತಾ ಪಟ್ಟಿಯಲ್ಲಿ ನಮೂದಿಸಿರುವ ಸೇವಾ ವಿವರ, ಜ್ಯೇಷ್ಠತಾ ಸ್ಥಾನ ಸ್ಥಿತಿ ಮತ್ತು ಜ್ಯೇಷ್ಠತೆಗೆ ಸಂಬಂಧಿಸಿದ ಇತರೆ ಅಂಶಗಳ ಬಗ್ಗೆ ಆಕ್ಷೇಪಣೆಗಳಿದ್ದಲ್ಲಿ, ಆಕ್ಷೇಪಣೆಗಳನ್ನು ಸಮರ್ಥಿಸುವಂಥಹ ದೃಢೀಕೃತ ದಾಖಲೆಗಳೊಂದಿಗೆ ತಾತ್ಕಾಲಿಕ ಜ್ಯೇಷ್ಠತಾ ಪಟ್ಟಿ ಪ್ರಕಟಗೊಂಡ ದಿನಾಂಕದಿಂದ 30 ದಿನಗಳೊಳಗಾಗಿ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಕ.ರಾ.ರ.ಸಾ.ನಿಗಮ, ಕೇಂದ್ರ ಕಛೇರಿ, ವರಿಷ್ಠತಾ ಶಾಖೆ, ಬೆಂಗಳೂರು ರವರಿಗೆ ತಲುಪುವಂತೆ ಸಲ್ಲಿಸಲು ಈ ಮೂಲಕ ಸೂಚಿಸಲಾಗಿದೆ ಹಾಗೂ ನಿಗದಿತ ಅವಧಿಯ ನಂತರ ಸಲ್ಲಿಸುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ. ಆಕ್ಷೇಪಣೆಗಳನ್ನು ಪರಿಶೀಲಿಸಿ ಅಂತಿಮಗೊಳಿಸಿದ ಜ್ಯೇಷ್ಠತಾ ಪಟ್ಟಿಗಳನ್ನು ಸಹ ನಿಗಮದ ಅಧಿಕೃತ ಜಾಲತಾಣದಲ್ಲಿ ಪ್ರಕಟಿಸಲಾಗುವುದು.

ಮುಂದುವರೆದು, ಜ್ಯೇಷ್ಠತಾ ಪಟ್ಟಿಗಳನ್ನು ನಿಗಮದ ಅಧಿಕೃತ ಜಾಲತಾಣದಲ್ಲಿ ಪ್ರಕಟಿಸುತ್ತಿರುವುದರಿಂದ, ವೈಯಕ್ತಿಕವಾಗಿ ಉದ್ಯೋಗಿಗಳಿಗೆ ಜಾರಿಗೊಳಿಸಲಾಗುವುದಿಲ್ಲವೆಂದು ಈ ಮೂಲಕ ಸ್ಪಷ್ಟಪಡಿಸಲಾಗಿದೆ.

ಸದರಿ ಸುತ್ತೋಲೆಯನ್ನು ಎಲ್ಲಾ ಅಧಿಕಾರಿಗಳು/ಸಿಬ್ಬಂದಿಗಳ ಗಮನಕ್ಕೆ ತರುವಂತೆ ಈ ಮೂಲಕ ಸೂಚಿಸಲಾಗಿದೆ.

ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು